Akashvani: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

11.03.2026 14.30hrs

*********

**ಮುಖ್ಯಾಂಶಗಳು :**

- ಅಡುಗೆ ಅನಿಲ ಮಿತವಾಗಿ ಬಳಸುವಂತೆ ವಿಧಾನಸಭೆಯಲ್ಲಿ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಮನವಿ
- ಕಾರ್ಮಿಕ ಇಲಾಖೆ ಶಿಫಾರಸ್ಸಿನಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿಯ ವೇತನ ಪರಿಷ್ಕರಣೆ - ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ
- ಭೂಸ್ವಾಧೀನ ಪ್ರಕ್ರಿಯೆ ಪರಿಹಾರದಲ್ಲಿ ರೈತರಿಗೆ ಅನ್ಯಾಯ - ಮಾರ್ಗಸೂಚಿ ದರ ಪರಿಷ್ಕರಣೆಗೆ ಸಚಿವ ಕೃಷ್ಣ ಬೈರೇಗೌಡ ಆಗ್ರಹ
- ಕಾಸರಗೋಡು-ಮಂಗಳೂರಿಗೆ ಸಂಪರ್ಕ ಕಲ್ಪಿಸುವ ಷಟ್ಪಥ ಯೋಜನೆ ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
- ಎಲ್‌ಪಿಜಿ ಸಿಲಿಂಡರ್ ಕೊರತೆ ಹಿನ್ನೆಲೆ; ಬೆಂಗಳೂರಿನ ಬನಶಂಕರಿ ದೇವಾಲಯದಲ್ಲಿ ಅನ್ನ ಪ್ರಸಾದ ಸೇವೆ ತಾತ್ಕಾಲಿಕ ಸ್ಥಗಿತ

**********

ರಾಜ್ಯದಲ್ಲಿ ಗೃಹಬಳಕೆ ಅಡುಗೆ ಅನಿಲ ಪೂರೈಕೆ ಸಮಸ್ಯೆಯಿಲ್ಲ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಪ್ರತಿ ಕುಟುಂಬಕ್ಕೆ ೨೫ ದಿನಕ್ಕೆ ಒಂದು ಅಡುಗೆ ಅನಿಲ ಸಿಲಿಂಡರ್ ಪೂರೈಸಲಾಗುತ್ತದೆ ಎಂದು ಹೇಳಿದ್ದಾರೆ. ವಿಧಾನಸಭೆಯ ಶೂನ್ಯ ವೇಳೆಯಲ್ಲಿ ಅಡುಗೆ ಅನಿಲ ಅಭಾವದ ವಿಷಯ ಪ್ರಸ್ತಾಪಿಸಿದ ಆಡಳಿತ ಪಕ್ಷದ ಸದಸ್ಯ ಡಾ.ಎಚ್.ಡಿ.ರಂಗನಾಥ್ ವಾಣಿಜ್ಯ ಬಳಕೆಯ ಅಡುಗೆ ಅನಿಲ ಪೂರೈಕೆ ಸರಾಗವಾಗಿ ಆಗದೆ ಹೋಟೆಲ್, ರೆಸ್ಟೊರೆಂಟ್ ಗಳನ್ನು ಮುಚ್ಚಲಾಗುತ್ತದೆ. ಕೆಲವರು ವಾಣಿಜ್ಯ ಬಳಕೆಯ ಅಡುಗೆ ಅನಿಲವನ್ನು ಕಾಳ ಸಂತೆಯಲ್ಲಿ ಮಾರಾಟ ಮಾಡುತ್ತಾರೆ ಎಂದು ಸದನದ ಗಮನಕ್ಕೆ ತಂದರು.ಸದಸ್ಯರ ಆತಂಕಕ್ಕೆ ಸ್ಪಂದಿಸಿದ ಸಚಿವ ಕೆ.ಎಚ್.ಮುನಿಯಪ್ಪ ಈಗಾಗಲೇ ಅಡುಗೆ ಅನಿಲ ಪೂರೈಸುವ ಬಿಪಿಎಲ್, ಎಚ್‌ಪಿ ಹಾಗೂ ಇಂಡಿಯನ್ ಆಯಿಲ್ ಕಂಪನಿಯ ಮುಖ್ಯಸ್ಥರೊಂದಿಗೆ ಸಭೆ ನಡೆಸಿದ್ದು, ಪ್ರತಿ ಕುಟುಂಬಕ್ಕೆ ೨೫ ದಿನಕ್ಕೊಂದು ಗೃಹ ಬಳಕೆಯ ಸಿಲಿಂಡರ್ ಪೂರೈಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಹೀಗಾಗಿ ರಾಜ್ಯದ ಜನತೆ ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅಡುಗೆ ಅನಿಲ ಮಿತವಾಗಿ ಬಳಸಬೇಕು, ಅಕ್ರಮ ದಾಸ್ತಾನು ಮಾಡಬಾರದು ಎಂದು ಸಚಿವರು ಇದೇ ವೇಳೆ

ಮನವಿ ಮಾಡಿದ್ದಾರೆ. ಅಡುಗೆ ಅನಿಲ ಕೊರತೆ ಸಂಬಂಧಿಸಿದಂತೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಸದನದಲ್ಲಿ ಕೆಲಕಾಲ ವಾಗ್ವಾದಕ್ಕೆ ಕಾರಣವಾಯಿತು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ತೈಲ ಪೂರೈಕೆ ಕಂಪನಿಗಳ ಜೊತೆಗೆ ಸಭೆ ನಡೆಸಲಾಗಿದೆ ಎಂದು ತಿಳಿಸಿದರು. ಇದೇ ವೇಳೆ, ಕೇಂದ್ರ ಸಚಿವ ಹರ್‌ದೀಪ್ ಸಿಂಗ್ ಪುರಿ ನೀಡಿದ ಹೇಳಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸದನದಲ್ಲಿ ಪ್ರಸ್ತಾಪಿಸಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ ಮಧ್ಯಪ್ರವೇಶಿಸಿ ಮಾತನಾಡಿ ಇರಾನ್-ಇಸ್ರೇಲ್ ಸಂಘರ್ಷದಿಂದ ಎಲ್ಲಾ ಕಡೆ ಸಮಸ್ಯೆಯಿದೆ ಎಂದು ಕೇಂದ್ರ ಸರ್ಕಾರವನ್ನು ಸಮರ್ಥಿಸಿಕೊಂಡರು. ಈ ಸಮಯದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗೊಂದಲದ ವಾತಾವಾರಣ ಉಂಟಾಯಿತು. ಈ ವೇಳೆ ಮಧ್ಯ ಪ್ರವೇಶಿಸಿ ಮಾತನಾಡಿದ ಸಚಿವ ಕೆ.ಎಚ್.ಮುನಿಯಪ್ಪ ಈ ಸಮಯದಲ್ಲಿ ಗ್ರಾಹಕರು ಸಹಕರಿಸಬೇಕು ಎಂದು ತಿಳಿಸಿದರು. ಆಸ್ಪತ್ರೆ, ಹಾಸ್ಟೆಲ್‌ಗಳಿಗೆ ಸಿಲಿಂಡರ್ ಪೂರೈಸಲಾಗುವುದು ಎಂದು ತಿಳಿಸಿದ ಅವರು, ಹೊಟೇಲ್ ಹಾಗೂ ಕಲ್ಯಾಣ ಮಂಟಪದ ಮಾಲೀಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

**********

ರಾಜ್ಯದ ಗ್ರಾಮಪಂಚಾಯತಿ ಸಿಬ್ಬಂದಿಗಳಿಗೆ ಕನಿಷ್ಠ ವೇತನ ನೀಡುವ ಸಂಬಂಧ ಕಾರ್ಮಿಕ ಇಲಾಖೆಯು ೨೦೨೫ರಲ್ಲಿ ಕನಿಷ್ಠ ವೇತನ ದರ ಪರಿಷ್ಕರಿಸಲು ಕರಡು ಅಧಿಸೂಚನೆ ಹೊರಡಿಸಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಶೃಂಗೇರಿ ಶಾಸಕ ರಾಜೇಗೌಡ.ಟಿ.ಡಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಿಯಾಂಕ್ ಖರ್ಗೆ ವೇತನ ಪರಿಷ್ಕರಣೆ ಸಂಬಂಧ ಕಾರ್ಮಿಕ ಇಲಾಖೆ ಅಂತಿಮ ಅಧಿಸೂಚನೆ ಹೊರಡಿಸುವುದು ಬಾಕಿಯಿದೆ. ಅಂತಿಮ ಅಧಿಸೂಚನೆ ಹೊರಡಿಸುತ್ತಿದ್ದಂತೆ ಕಾರ್ಮಿಕ ಇಲಾಖೆ ಶಿಫಾರಸ್ಸಿನಂತೆ ವೇತನ ಪರಿಷ್ಕರಣೆ ಮಾಡಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

**********

ಎಸ್.ಸಿ.ಎಸ್‌ಪಿ-ಟಿ.ಎಸ್.ಪಿಗೆ ಬಜೆಟ್‌ನಲ್ಲಿ ಘೋಷಿಸಿದ ಹಣ ಬೇರೆ, ಬೇರೆ ಇಲಾಖೆಗೆ ಹಂಚಿಕೆ ಮಾಡಿದರೂ ಅದನ್ನು ಪರಿಶಿಷ್ಟ ಸಮುದಾಯಕ್ಕೆ ವಿನಿಯೋಗ ಮಾಡಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಚಂದ್ರಪ್ಪ.ಎಂ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಎಸ್.ಸಿ.ಎಸ್‌ಪಿ-ಟಿ.ಎಸ್.ಪಿ ಯೋಜನೆಯನ್ನು ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳು ಜಾರಿಗೆ ತಂದಿವೆ. ಈ

ಕಾನೂನು ಜಾರಿಗೆ ಬಂದ ಮೇಲೆ ಪರಿಶಿಷ್ಟ ಸಮುದಾಯದ ಜನಸಂಖ್ಯೆಗೆ ತಕ್ಕಂತೆ ಬಜೆಟ್‌ನಲ್ಲಿ ಹಣ ಮೀಸಲಿಡಲಾಗುತ್ತದೆ. ಹೀಗೆ ಮೀಸಲಿರಿಸಿದ ಹಣವನ್ನು ಬೇರೆ ಬೇರೆ ಇಲಾಖೆಗೆ ನೀಡಿದರೂ ಆ ಇಲಾಖೆ ಮೂಲಕ ಪರಿಶಿಷ್ಟ ಸಮುದಾಯದ ಕಲ್ಯಾಣಕ್ಕೆ ವಿನಿಯೋಗಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

**********

ಭೂಸ್ವಾಧೀನ ಪ್ರಕ್ರಿಯೆ ಪರಿಹಾರದ ವಿಚಾರದಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯ ತಪ್ಪಿಸಲು ಕಾಲ ಕಾಲಕ್ಕೆ ಮಾರ್ಗಸೂಚಿ ದರ ಪರಿಷ್ಕರಣೆ ಮಾಡುವುದೊಂದೇ ಪರಿಹಾರ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ. ವಿಧಾನಪರಿಷತ್‌ನಲ್ಲಿಂದು ಸದಸ್ಯ ಕೆ.ಎಸ್. ನವೀನ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೆಲವು ಕಡೆ ಮಾರ್ಗಸೂಚಿ ದರಕ್ಕೂ, ಮಾರುಕಟ್ಟೆ ದರಕ್ಕೂ ಅಜಗಜಾಂತರ ವ್ಯತ್ಯಾಸಗಳಿವೆ. ಕೆಲವೆಡೆ ಭೂಮಿ ಮಾರ್ಗಸೂಚಿ ದರ ೨ ಲಕ್ಷ ವಿದ್ದರೆ, ಮಾರುಕಟ್ಟೆ ಮೌಲ್ಯ ೭೦ ರಿಂದ ೮೦ ಲಕ್ಷವಿದೆ, ಇದು ಕಪ್ಪು ಹಣದ ವಹಿವಾಟಿಗೂ ಕಾರಣವಾಗಿದೆ. ರೈತರಿಗೆ ನ್ಯಾಯ ಬದ್ಧ ಪರಿಹಾರ ನೀಡಲು ಮಾರ್ಗಸೂಚಿ ದರಪರಿಷ್ಕರಣೆಯೊಂದೇ ಪರಿಹಾರ ಎಂದು ಸ್ಪಷ್ಟಪಡಿಸಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಅವರು, ಕೇರಳದ ಎರ್ನಾಕುಲಂನಲ್ಲಿ ಸುಮಾರು ೧೧ ಸಾವಿರ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಇಂದು ಚಾಲನೆ ನೀಡಿದರು. ರಸ್ತೆ ಮೂಲಸೌಕರ್ಯ ವಲಯದಲ್ಲಿ ಎರಡು ಪ್ರಮುಖ ಹೆದ್ದಾರಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಿದರು. ಎರಡು ಸಾವಿರದ ೬೫೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ನಿರ್ಮಿಸಲಾದ ರಾಷ್ಟ್ರೀಯ ಹೆದ್ದಾರಿ ೬೬ರ ತಲಪಾಡಿ - ಚೆಂಗಲ ವಿಭಾಗದ ೬ ಪಥದ ಯೋಜನೆಯನ್ನು ಅವರು ಉದ್ಘಾಟಿಸಿದರು. ಈ ಹೆದ್ದಾರಿಯು, ಕಾಸರಗೋಡು, ಕಣ್ಣೂರು ಮತ್ತು ಮಂಗಳೂರು ನಡುವಿನ ಸಂಪರ್ಕ ಕಲ್ಪಿಸಲಿದೆ. ಇದು ಮುಂಬೈ - ಕನ್ಯಾಕುಮಾರಿ ಆರ್ಥಿಕ ಕಾರಿಡಾರ್‌ನ ಭಾಗವಾಗಿದೆ.

*****END*****

ಇರಾನ್ - ಇಸ್ರೇಲ್ ಸಂಘರ್ಷದ ಪರಿಣಾಮ ದೇಶದಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ತೀವ್ರ ಕೊರತೆ ಎದುರಾಗಿದೆ. ಬೆಂಗಳೂರಿನ ಬನಶಂಕರಿ ದೇವಾಲಯಕ್ಕೂ ಇದರ ಬಿಸಿ ತಟ್ಟಿದ್ದು, ದೇವಾಲಯದಲ್ಲಿನ ಅನ್ನಪ್ರಸಾದ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಆಡಳಿತ ಮಂಡಳಿ ತಿಳಿಸಿದೆ. ಕುಕ್ಕೆ ಸುಬ್ರಹ್ಮಣ್ಯ ದೇವಾಲಯದಲ್ಲಿಯೂ ಎಲ್‌ಪಿಜಿ ಸಿಲಿಂಡರ್‌ಗಳ

ಕೊರತೆ ಎದುರಾಗಿದೆ, ಮುಂದಿನ ದಿನಗಳಲ್ಲಿ ಇದೇ ಪರಿಸ್ಥಿತಿ ಮುಂದುವರಿದರೆ ಅವಲಕ್ಕಿ, ಮೊಸರು ನೀಡಲು ಆಡಳಿತ ಮಂಡಳಿ ನಿರ್ಧರಿಸಿದೆ.

**********

ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿನ ಸಂಘರ್ಷದ ಹಿನ್ನೆಲೆಯಲ್ಲಿ ಜಿಲ್ಲೆಯ ಮಾರುಕಟ್ಟೆಯಲ್ಲಿ ಆಹಾರ ಪದಾರ್ಥಗಳು ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಅಥವಾ ಅಕ್ರಮ ದಾಸ್ತಾನು ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದ್ದಾರೆ. ಅಕ್ರಮ ದಾಸ್ತಾನು ಮಾಡಿದವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.  ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳು ಚುರುಕುಗೊಂಡಿದ್ದು, ರೈತರಿಗೆ ಬೇಕಾದ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಕಗಳನ್ನು ಕಾಳಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಜಿಲ್ಲಾಡಳಿತದ ಗಮನಕ್ಕೆ ಬಂದಿದೆ. ರೈತರಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರಕ್ಕೆ ಕೃಷಿ ಪರಿಕರ ಮಾರಾಟ ಮಾಡುವ ವರ್ತಕರ ಮಾರಾಟ ಪರವಾನಗಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗುವುದು ಎಂದು ತಿಳಿಸಿದ್ದಾರೆ.

**********

ಬೆಂಗಳೂರಿನ ಬೊಮ್ಮಸಂದ್ರದಲ್ಲಿ ಉಪ ಪ್ರಾದೇಶಿಕ ಕಚೇರಿಯ ನೌಕರರ ರಾಜ್ಯ ವಿಮಾ ನಿಗಮದ ೭೫ನೇ ಸಂಸ್ಥಾಪನಾ ದಿನದ ಸಮಾರೋಪ ಸಮಾರಂಭ ನಡೆಯಿತು. ಇದೇ ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಉಪ ಪ್ರಾದೇಶಿಕ ಕಚೇರಿಯ ನೌಕರರ ರಾಜ್ಯ ವಿಮಾ ನಿಗಮದ ಸದಸ್ಯೆ ಜ್ಯೋತಿ ಭಂಡಾರಿ, ಸಬಲೀಕರಣಗೊಂಡ ಮಹಿಳೆಯರ ಮೂಲಕ ಅಭಿವೃದ್ಧಿಹೊಂದಿದ ಸಮಾಜವನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

**********

ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಆರಂಭಿಸಿರುವ ಉದ್ಯೋಗಿನಿ ಯೋಜನೆಯಡಿ ಒಂಬತ್ತು ಸಾವಿರ ಮಂದಿ ಅರ್ಜಿ ಸಲ್ಲಿಸಿದ್ದು ಅದರಲ್ಲಿ ೪೭೦ ಮಂದಿಯನ್ನು ಆಯ್ಕೆ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸಭಾ ಸದಸ್ಯ ಸಿದ್ದು ಸವದಿ ಪ್ರಶ್ನೆಗೆ, ಉತ್ತರಿಸಿದ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ನಾಲ್ಕರಿಂದ ಐದು ಮಂದಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. ಕೆಲವು ಶಾಸಕರಿಂದ ಫಲಾನುಭವಿಗಳ ಆಯ್ಕೆ ವಿಳಂಬವಾಗುತ್ತಿದೆ ಎಂದು ಹೇಳಿದ್ದಾರೆ.ಉದ್ಯೋಗಿನಿ ಯೋಜನೆಯಡಿ ಆಯಾ ವಿಧಾನಸಭಾ ಕ್ಷೇತ್ರದ ಫಲಾನುಭವಿಗಳ

ಸಂಖ್ಯೆ ಹೆಚ್ಚಿಸುವುದರ ಜೊತೆಗೆ ಯೋಜನೆಯ ನಿಯಮಗಳನ್ನು ಇನಷ್ಟು ಸರಳೀಕರಣಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

**********

ಬ್ರಹ್ಮಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮವನ್ನು ಕಂಪನಿ ಆರ್ಕ್ಟ್‌ನಲ್ಲಿ ನೋಂದಣಿ ಮಾಡಲಾಗಿದ್ದು, ನಾರಾಯಣ ಕೋಶದಲ್ಲಿದ್ದ ೧೦ ಕೋಟಿ ರೂಪಾಯಿಯನ್ನು ನಾರಾಯಣಗುರು ಅಭಿವೃದ್ಧಿ ನಿಗಮಕ್ಕೆ ವರ್ಗಾವಣೆ ಮಾಡಲಾಗಿದೆ ಎಂದು ಹಿಂದುಳಿದ ವರ್ಗಗಳ ಖಾತೆ ಸಚಿವ ಶಿವರಾಜ್ ತಂಗಡಗಿ ವಿಧಾನಸಭೆಗೆ ಮಾಹಿತಿ ನೀಡಿದ್ದಾರೆ. ಸಚಿವರ ಉತ್ತರದಿಂದ ತೃಪ್ತರಾಗದ ಬಿಜೆಪಿ ಸದಸ್ಯರಾದ ಸುನೀಲ್ ಕುಮಾರ್, ಸುರೇಶ್ ಶೆಟ್ಟಿ, ಕಾಂಗ್ರೆಸ್‌ನ ಬೇಳೂರು ಗೋಪಾಲ ಕೃಷ್ಣ ಸಮಾಜದಲ್ಲಿ ಸುಧಾರಣೆ ತಂದ ಬ್ರಹ್ಮಶ್ರೀ ನಾರಾಯಣ ಗುರುಗಳ ಅಭಿವೃದ್ಧಿ ನಿಗಮಕ್ಕೆ ಕನಿಷ್ಠ ನೂರು ಕೋಟಿ ರೂಪಾಯಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಸುರೇಶ್ ಶೆಟ್ಟಿ ಮಾತನಾಡಿ ಕುಲಕಸಬು ಇಲ್ಲದೆ ಗುಳೆ ಹೋಗುತ್ತಿರುವ ಈಡಿಗ, ಬಿಲ್ಲವ, ನಾಮಧಾರಿ, ದಿವರು ಸಮುದಾಯದವರಿಗೆ ಸೇಂದಿ ಇಳಿಸಲು ಅವಕಾಶ ನೀಡಬೇಕು. ಬ್ರಹ್ಮಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮಕ್ಕೆ ೫೦೦ ಕೋಟಿ ರೂಪಾಯಿ ನೀಡಬೇಕು ಎಂದು ಮನವಿ ಮಾಡಿದರು.

ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವ ಶಿವರಾಜ್ ತಂಗಡಗಿ ಬ್ರಹ್ಮಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮಕ್ಕೆ ಈ ಹಣಕಾಸು ವರ್ಷದಲ್ಲಿ ಹೆಚ್ಚು ಹಣ ನೀಡಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು. ನಾರಾಯಣಗುರು ಅಭಿವೃದ್ಧಿ ನಿಗಮದಿಂದ ಆ ಸಮುದಾಯದವರಿಗೆ ನೇರ ಸಾಲ, ಗಂಗಾ ಕಲ್ಯಾಣ ಸೇರಿದಂತೆ ಹಲವಾರು ಸೌಲಭ್ಯ ನೀಡಲಾಗುವುದು ಎಂದು ಹೇಳಿದರು.

******END****